ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 20/08/2019

## ಕನ್ನಡಿಗರ ಹಿತರಕ್ಷಣೆಗೆ ಬದ್ಧ : ಸಿಎಂ



**ಬೆಂಗಳೂರು:** ಕನ್ನಡ ಹಾಗೂ ಕನ್ನಡಿಗರ ಹಿತರಕ್ಷಣೆಗೆ ನಮ್ಮ ಸರಕಾರ ಬದ್ಧವಾಗಿದೆ. ಇದರಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಸಿಎಂ ಯಡಿಯೂರಪ್ಪ ಸ್ಪಷ್ಟಪಡಿಸಿದ್ದಾರೆ. ಕಾನೂನು -ಸುವ್ಯವಸ್ಥೆ ದೃಷ್ಟಿಯಿಂದ ಭಾನುವಾರ ನಡೆದ ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆಯೇ ವಿನಾ ಕನ್ನಡ ಹೋರಾಟಗಾರರನ್ನು ಗುರಿಯಾಗಿಸಿಕೊಂಡು ಕ್ರಮ ತೆಗೆದುಕೊಂಡಿಲ್ಲ. ನಾವು ರೈತರ ಪರ ಇರುವುದು ಎಷ್ಟು ಸ್ಪಷ್ಟವೋ, ಕನ್ನಡಿಗರ ಪರ ಇರುವುದು ಅಷ್ಟೇ ಸತ್ಯ. ಸರ್ವೇಜನಾಃ ಸುಖಿನೋ ಭವಂತು ಎನ್ನುವುದೇ ನನ್ನ ಮೂಲಮಂತ್ರ ಎಂದು ಹೇಳಿದ್ದಾರೆ.